# Akashvani : Bangalore

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

## 09.04.2024 / 18.40 hrs

**ಮುಖ್ಯಾಂಶಗಳು**

೧. ನಾಳೆ ದ್ವಿತೀಯ ಪಿಯುಸಿ ಫಲಿತಾಂಶ ಪ್ರಕಟ ; ಶಿಕ್ಷಣ ಇಲಾಖೆಯ ವೆಬ್‌ಸೈಟ್‌ನಲ್ಲಿ ಲಭ್ಯ

೨. ಸಾರ್ವತ್ರಿಕ ಚುನಾವಣೆ-೨೦೨೪ ; ಕಡ್ಡಾಯ ಮತದಾನಕ್ಕೆ ರಾಜ್ಯಾದ್ಯಂತ ಸ್ವೀಪ್ ಮೂಲಕ ಮನವಿ

೩. ಮುಕ್ತ ಹಾಗೂ ನ್ಯಾಯಸಮ್ಮತ ಚುನಾವಣೆ ; ಚುನಾವಣಾ ಆಯೋಗ ಕಟ್ಟೆಚ್ಚರ

೪. ರಾಜ್ಯದ ದಕ್ಷಿಣ ಒಳನಾಡಿನಲ್ಲಿ ಇನ್ನೂ ೨ ದಿನಗಳ ಕಾಲ ತಾಪಮಾನ ಹೆಚ್ಚಳ - ಹವಾಮಾನ ಇಲಾಖೆ ಮುನ್ನೆಚ್ಚರಿಕೆ

<><*<><>*><>

ದ್ವಿತೀಯ ಪಿಯುಸಿ ಪರೀಕ್ಷಾ ಫಲಿತಾಂಶ ನಾಳೆ ಬೆಳಿಗ್ಗೆ ೧೦ ಗಂಟೆಗೆ ಕರ್ನಾಟಕ ಪರೀಕ್ಷಾ ಮತ್ತು ಮೌಲ್ಯಮಾ ನ ಮಂಡಳಿ ಅಧಿಕೃತವಾಗಿ ಪ್ರಕಟಿಸಲಿದೆ. ಬೆಳಿಗ್ಗೆ ೧೧ ಗಂಟೆಗೆ ಮಂಡಳಿಯ ಜಾಲತಾಣದಲ್ಲಿ ಫಲಿತಾಂಶ ಲಭ್ಯವಿರಲಿದೆ. ರಾಜ್ಯಾದ್ಯಂತ ಈ ಬಾರಿ ೧ ಸಾವಿರದ ೧೨೪ ಕೇಂದ್ರಗಳಲ್ಲಿ ೬ ಲಕ್ಷ ೯೮ ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದರು. ವಿದ್ಯಾರ್ಥಿಗಳು ಮತ್ತು ಪೋಷಕರು ಶಿಕ್ಷಣ ಇಲಾಖೆಯ ವೆಬ್‌ಸೈಟ್ karresultsnic.in ಭೇಟಿ ನೀಡಿ ಫಲಿತಾಂಶ ವೀಕ್ಷಿಸಬಹುದು ಎಂದು ತಿಳಿಸಿದೆ.

<><*<><>*><>

ಲೋಕಸಭೆ ಚುನಾವಣೆಯ ೨ನೇ ಹಂತಕ್ಕೆ ನಾಮಪತ್ರ ಹಿಂಪಡೆಯಲು ನಿನ್ನೆ ಕೊನೆಯ ದಿನವಾಗಿತ್ತು. ರಾಜ್ಯದ ೧೪ ಕ್ಷೇತ್ರಗಳಲ್ಲಿ ಒಟ್ಟು ೨೪೭ ಅಭ್ಯರ್ಥಿಗಳು ಕಣದಲ್ಲಿ ಉಳಿದಿದ್ದಾರೆ. ಆಯೋಗ ೩೫೮ ಅಭ್ಯರ್ಥಿಗಳಿಂದ ನಾಮಪತ್ರಗಳನ್ನು ಸ್ವೀಕರಿಸಿತ್ತು, ಅದರಲ್ಲಿ ೩೦೦ ಅಭ್ಯರ್ಥಿಗಳ ನಾಮಪತ್ರಗಳು ಮಾತ್ರ ಸಿಂಧುವಾಗಿದೆ ಮತ್ತು ಆನಂತರ ೫೩ ಅಭ್ಯರ್ಥಿಗಳು ತಮ್ಮ ನಾಮಪತ್ರಗಳನ್ನು ವಾಪಸ್ ಪಡೆದಿದ್ದಾರೆ. ಇದರಿಂದಾಗಿ ಅಭ್ಯರ್ಥಿಗಳ ಸಂಖ್ಯೆ ೨೪೭ ಕ್ಕೆ ಇಳಿಕೆಯಾಗಿದೆ. ಈ ಪೈಕಿ ೨೨೬ ಪುರುಷ ಮತ್ತು ೨೧ ಮಹಿಳಾ ಅಭ್ಯರ್ಥಿಗಳಿದ್ದಾರೆ. ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದಲ್ಲಿ ಅತಿ ಹೆಚ್ಚು ೨೯ ಅಭ್ಯರ್ಥಿಗಳು ಮತ್ತು ದಕ್ಷಿಣ ಕನ್ನಡ ಕ್ಷೇತ್ರದಲ್ಲಿ ಅತಿ ಕಡಿಮೆ ಒಂಬತ್ತು ಅಭ್ಯರ್ಥಿಗಳು ಕಣದಲ್ಲಿದ್ದಾರೆ. ಬಿಜೆಪಿಯಿಂದ ತೇಜಸ್ವಿ ಸೂರ್ಯ, ವಿ. ಸೋಮಣ್ಣ, ಡಾ.ಸಿ.ಎನ್.ಮಂಜುನಾಥ್ ಮತ್ತು ಪಿ.ಸಿ.ಮೋಹನ್, ಕಾಂಗ್ರೆಸ್‌ನಿಂದ ಡಿ.ಕೆ.ಸುರೇಶ್, ಮನ್ಸೂರ್ ಅಲಿಖಾನ್, ಕೆ.ವಿ.ಗೌತಮ್ ಮತ್ತು ಸೌಮ್ಯರೆಡ್ಡಿ ಮತ್ತು ಜೆಡಿಎಸ್ ಮತ್ತು ಬಿಜೆಪಿ ಮೈತ್ರಿ ಅಭ್ಯರ್ಥಿ ಎಚ್.ಡಿ.ಕುಮಾರಸ್ವಾಮಿ ಕಣದಲ್ಲಿರುವ ಪ್ರಮುಖ ಅಭ್ಯರ್ಥಿಗಳು ಇದೇ ೨೬ರಂದು ಮತದಾನ ನಡೆಯಲಿದೆ.

<><*<><>*><>

ಧಾರವಾಡದಲ್ಲಿ ಮೇ ೭ರಂದು ಮತದಾನ ನಡೆಯಲಿದ್ದು ಅಂದು ತಪ್ಪದೆ ಅರ್ಹರು ಮತ ಚಲಾಯಿಸಬೇಕು ಎಂದು ಜಿಲ್ಲೆಯ ಚುನಾವಣಾ ರಾಯಭಾರಿ ರಾಷ್ಟ್ರೀಯ ಪ್ಯಾರಾ ಶೂಟರ್ ಜ್ಯೋತಿ ಸಣ್ಣಕ್ಕಿ ಮನವಿ ಮಾಡಿದ್ದಾರೆ. ಮತದಾನ ಸಂವಿಧಾನ ನೀಡಿರುವ ಹಕ್ಕು. ಆದ್ದರಿಂದ ಲೋಕಸಭಾ ಚುನಾವಣೆಯಲ್ಲಿ ಅರ್ಹ ಮತದಾರರು ತಪ್ಪದೇ ಮತ ಚಲಾಯಿಸಬೇಕು ಎಂದು ಅವರು ಹೇಳಿದ್ದಾರೆ.

ಧ್ವನಿ : ಜ್ಯೋತಿ ಸಣ್ಣಕ್ಕಿ

ಚಿತ್ರದುರ್ಗ ಲೋಕಸಭಾ ಕ್ಷೇತ್ರದಲ್ಲಿ ಅಂತಿಮವಾಗಿ ೨೦ ಅಭ್ಯರ್ಥಿಗಳು ಕಣದಲ್ಲಿ ಉಳಿದಿದ್ದಾರೆ. ಮಾನ್ಯತೆ ಪಡೆದ ರಾಷ್ಟ್ರೀಯ ಮತ್ತು ರಾಜ್ಯ ರಾಜಕೀಯ ಪಕ್ಷಗಳ ಅಭ್ಯರ್ಥಿಗಳನ್ನು ಹೊರತುಪಡಿಸಿ, ಉಳಿದ ನೊಂದಾಯಿತ ರಾಜಕೀಯ ಪಕ್ಷಗಳು ಹಾಗೂ ಇತರೆ ಪಕ್ಷೇತರ ಅಭ್ಯರ್ಥಿಗಳಿಗೆ ಚುನಾವಣೆ ಚಿಹ್ನೆಯನ್ನು ಜಿಲ್ಲಾ ಚುನಾವಣಾಧಿಕಾರಿ ಟಿ.ವೆಂಕಟೇಶ್ ಹಂಚಿಕೆ ಮಾಡಿದ್ದಾರೆ.

ಉಡುಪಿ ಮತದಾನದ ಹಕ್ಕನ್ನು ಪ್ರತಿಯೊಬ್ಬರು ಜವಾಬ್ದಾರಿಯುತವಾಗಿ ಚಲಾಯಿಸುವ ಮೂಲಕ ಉತ್ತಮ ಅಭ್ಯರ್ಥಿಗಳನ್ನು ಆಯ್ಕೆ ಮಾಡಿ, ಪ್ರಜಾಪ್ರಭುತ್ವವನ್ನು ಮತ್ತಷ್ಟು ದೃಢಗೊಳಿಸಬೇಕೆಂದು ಜಿಲ್ಲಾಧಿಕಾರಿ ಡಾ.ಕೆ ವಿದ್ಯಾಕುಮಾರಿ ಮನವಿ ಮಾಡಿದರು. ಯಾವುದೇ ಆಸೆ ಆಮಿಷಕ್ಕೆ ಒಳಗಾಗದೆ ತಪ್ಪದೇ ಮತ ಚಲಾಯಿಸಬೇಕು ಎಂದು ಹೇಳಿದ್ದಾರೆ.

ಯಾದಗಿರಿ ಜಿಲ್ಲೆಯಲ್ಲಿ ಬಿಸಿಲಿನ ತಾಪಮಾನ ಹೆಚ್ಚಾಗಿರುವುದರಿಂದ ಕೂಲಿ ಕಾರ್ಮಿಕರು ಆರೋಗ್ಯದ ಕಡೆ ಹೆಚ್ಚು ಗಮನ ಕೊಡಬೇಕು. ತಪ್ಪದೆ ಎಲ್ಲರೂ ಕಡ್ಡಾಯವಾಗಿ ಮತದಾನ ಮಾಡಬೇಕು ಎಂದು ಪಂಚಾಯಿತಿ ಯೋಜನಾ

ನಿರ್ದೇಶಕ ಬಿ.ಎಸ್. ರಾಠೋಡ್ ಕರೆ ನೀಡಿದ್ದಾರೆ. ಬೇಸಿಗೆಯಲ್ಲಿ ಶೇಕಡ ೩೦ ರ? ಕೆಲಸದ ವಿನಾಯಿತಿ ಬಗ್ಗೆ ಮಾಹಿತಿ ನೀಡಿದರು. ಕೂಲಿ ಕಾರ್ಮಿಕರು ಕಾಮಗಾರಿ ಸ್ಥಳದಲ್ಲಿ ಎದುರಿಸುವ ಸಮಸ್ಯೆ ಹಾಗೂ ನರೇಗಾ ಕಾಮಗಾರಿ ಸಮಯದಲ್ಲಿ ನೆರಳಿನ ಆಸರೆ, ಶುದ್ಧ ಕುಡಿವ ನೀರಿನ ವ್ಯವಸ್ಥೆ ಕಲ್ಪಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಚಾಮರಾಜನಗರದಲ್ಲಿ ಲೋಕಸಭಾ ಚುನಾವಣೆಯನ್ನು ಮುಕ್ತ, ನ್ಯಾಯಸಮ್ಮತ ಹಾಗೂ ಪಾರದರ್ಶಕವಾಗಿ ನಡೆಸುವ ನಿಟ್ಟಿನಲ್ಲಿ ಜಾರಿಯಾಗಿರುವ ಮಾದರಿ ನೀತಿ ಸಂಹಿತೆಯನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಲೋಕಸಭಾ ಕ್ಷೇತ್ರದ ಸಾಮಾನ್ಯ ವೀಕ್ಷಕ ಪಿ.ಸಿ. ಮೀನಾ ಸೂಚನೆ ನೀಡಿದ್ದಾರೆ. ಚುನಾವಣೆಯನ್ನು ಪಾರದರ್ಶಕವಾಗಿ ಹಾಗೂ ಮುಕ್ತವಾಗಿ ನಡೆಸಬೇಕು. ಈ ನಿಟ್ಟಿನಲ್ಲಿ ಕ್ಷೇತ್ರವ್ಯಾಪ್ತಿಯಲ್ಲಿ ಹಲವಾರು ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

ಹಾಸನ ಲೋಕಸಭಾ ಕ್ಷೇತ್ರದಲ್ಲಿ ಅಂತಿಮ ಕಣದಲ್ಲಿರುವ ಅಭ್ಯರ್ಥಿಗಳೊಂದಿಗೆ ಕೇಂದ್ರ ಚುನಾವಣಾ ಆಯೋಗದ ವೀಕ್ಷಕರು ನಿನ್ನೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಸಭೆ ನಡೆಸಿದರು. ಸಾಮಾನ್ಯ ವೀಕ್ಷಕ ಚಂದ್ರಮೋಹನ್ ಠಾಕೂರ್ ಮಾತನಾಡಿ, ಸುಗಮ ಚುನಾವಣಾ ಪ್ರಕ್ರಿಯೆಗೆ ಅಭ್ಯರ್ಥಿಗಳು ಸಹಕರಿಸಬೇಕು ಎಂದು ಸೂಚಿಸಿದರು.

ಚುನಾವಣಾ ಖರ್ಚಿನ ಮಿತಿಯೊಳಗೆ ವೆಚ್ಚ ಮಾಡಬೇಕು. ಧಾರ್ಮಿಕ ಸ್ಥಳಗಳನ್ನು ಚುನಾವಣಾ ಪ್ರಚಾರಕ್ಕೆ ಬಳಸುವಂತಿಲ್ಲ ಎಂದು ತಿಳಿಸಿದರು. ಯಾವುದೇ ಸಭೆ-ಸಮಾರಂಭ ನಡೆಸಲು ಅನುಮತಿ ಪಡೆಯಲೇಬೇಕು. ವಾಹನಗಳನ್ನು ಅನುಮತಿ ಇಲ್ಲದೆ ಪ್ರಚಾರ ಕಾರ್ಯಕ್ಕೆ ಬಳಸುವಂತಿಲ್ಲ ಎಂದು ಸೂಚಿಸಿದರು.

ಬಳ್ಳಾರಿ ಜಿಲ್ಲೆಯ ವಿವಿಧ ವಾಣಿಜ್ಯ ಉದ್ದಿಮೆಗಳಲ್ಲಿ, ಕೈಗಾರಿಕಾ ಘಟಕ ಸೇರಿದಂತೆ ಸಣ್ಣ ಮತ್ತು ದೊಡ್ಡ ಘಟಕಗಳಲ್ಲಿ ಸೇವೆ ಸಲ್ಲಿಸುತ್ತಿರುವ ಕಾರ್ಮಿಕ ಹಾಗೂ ಸಿಬ್ಬಂದಿಗೆ ಮತದಾನದ ದಿನದಂದು ವೇತನ ಸಹಿತ ರಜೆ ನೀಡುವಂತೆ ಬಳ್ಳಾರಿ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ, ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಪ್ರತಿನಿಧಿಗಳಿಗೆ ಸೂಚಿಸಿದ್ದಾರೆ. ಈ ಆದೇಶ ಉಲ್ಲಂಘನೆ ಮಾಡಿದರೆ ಸಂಬಂಧಪಟ್ಟ ಸಂಸ್ಥೆ, ನಿಯೋಜಕರು, ವ್ಯವಸ್ಥಾಪಕರ ವಿರುದ್ಧ ನಿಯಮಾನುಸಾರ ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಅವರು ಎಚ್ಚರಿಕೆ ನೀಡಿದರು.

ಕೋಲಾರ ಮೀಸಲು ಲೋಕಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ, ಚುನಾವಣಾ ಕರ್ತವ್ಯಕ್ಕೆ ನಿಯೋಜನೆಗೊಂಡು ಇದೇ ಲೋಕಸಭಾ ಕ್ಷೇತ್ರ ವ್ಯಾಪ್ತಿಗೆ ಒಳಪಡುವ ಕರ್ತವ್ಯನಿರತ ಮತದಾರರು ಇಡಿಸಿ ಪಡೆಯಲು ನಮೂನೆ-೧೨ಎ ರಲ್ಲಿ ಅರ್ಜಿ ಸಲ್ಲಿಸಲು ನಾಳೆ ಅಂತಿಮ ದಿನಾಂಕವಾಗಿದೆ. ಚುನಾವಣಾ ಕರ್ತವ್ಯ ನಿರತ ಸಿಬ್ಬಂದಿ ಬೇರೆ ಲೋಕಸಭಾ ವ್ಯಾಪ್ತಿಯಲ್ಲಿ ಮತದಾರರಾಗಿರುವಂತಹವರು ಅಂಚೆ ಮತಪತ್ರಕ್ಕೆ ನಮೂನೆ-೧೨ ಅನ್ನು ಸಲ್ಲಿಸಲು ಇದೇ ೧೨ರಂದು ಕಡೆಯ ದಿನಾಂಕವಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಅಕ್ರಂ ಪಾಷ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಚಿಕ್ಕಮಗಳೂರು ನಗರದ ಹೊರ ವಲಯದ ಅಂಬಳೆ ಕೈಗಾರಿಕಾ ಪ್ರದೇಶದಲ್ಲಿ ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ವಿವಿಧ ಸಂಸ್ಥೆಗಳ ಕಾರ್ಮಿಕರಿಗಾಗಿ ಮತದಾನದ ಮಹತ್ವ ಕುರಿತು ಜಾಗೃತಿ ಕಾರ್ಯಕ್ರಮ ನಡೆಯಿತು. ಕಾರ್ಮಿಕರಿಗೆ ಮತದಾನದ ಪ್ರತಿಜ್ಞಾ ವಿಧಿಯನ್ನು ಬೋಧಿಸಿ ಮಾತನಾಡಿದ ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷ ಡಾ.ಗೋಪಾಲಕೃಷ್ಣ, ಇದೇ ೨೬ ರಂದು ನಡೆಯುವ ಲೋಕಸಭಾ ಚುನಾವಣೆಯಲ್ಲಿ ಎಲ್ಲರೂ ತಪ್ಪದೇ ಮತದಾನ ಮಾಡಬೇಕು. ಸದೃಢ ದೇಶ ಕಟ್ಟಲು ಶೇಕಡ ೧೦೦ ರಷ್ಟು ಮತದಾನ ಆಗಬೇಕು. ಯಾರೊಬ್ಬರೂ ಮತದಾನ ಪ್ರಕ್ರಿಯೆಯಿಂದ ದೂರ ಉಳಿಯಬಾರದು ಎಂದು ತಿಳಿಸಿದ್ದಾರೆ.

ವಿಜಯಪುರ ಜಿಲ್ಲೆಯ ದೇವರ ಹಿಪ್ಪರಗಿ ತಾಲೂಕಿನ ಮುಳಸಾವಳಗಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಪಡಗಾನೂರ ತಾಂಡಾ ಮತ್ತು ಹಿಟ್ನಳ್ಳಿ ತಾಂಡಾಗಳಲ್ಲಿ ಮತದಾನ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು. ಕಾರ್ಯಕ್ರಮದಲ್ಲಿ ಮನೆ ಮನೆ ಭೇಟಿ ನೀಡಿ ಕರಪತ್ರವನ್ನು ವಿತರಿಸಲಾಯಿತು. ತಾಂಡಾಗಳಲ್ಲಿ ಮತದಾನ ಮಾಡುವಂತೆ ಪ್ರತಿಜ್ಞಾವಿಧಿ ಬೋಧಿಸಲಾಯಿತು.

**<><*<><>*><>**

ಈಗ ಬಳ್ಳಾರಿ ಲೋಕಸಭಾ ಕ್ಷೇತ್ರದ ವಿವರಗಳು :

ವರದಿಯನ್ನು ಸಿದ್ದಪಡಿಸಿರುವವರು : ನಮ್ಮ ಜಿಲ್ಲಾ ಪ್ರತಿನಿಧಿ, ಎನ್.ವೀರಭದ್ರಗೌಡ

ಬಳ್ಳಾರಿ ಲೋಕಸಭಾಕ್ಷೇತ್ರ ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳ ವ್ಯಾಪ್ತಿಯ ಎಂಟು ವಿಧಾನಸಭಾ ಕ್ಷೇತ್ರಗಳನ್ನು ಹೊಂದಿರುವ ಪರಿಶಿಷ್ಟ ಸಮುದಾಯಕ್ಕೆ ಮೀಸಲಾಗಿರುವ ಕ್ಷೇತ್ರವಾಗಿದೆ.

ಈ ಕ್ಷೇತ್ರದಲ್ಲಿ ಮೇ ೭ ರಂದು ಮತದಾನ ನಡೆಯಲಿದ್ದು. ಇದೇ ೧೨ ರಿಂದ ನಾಮಪತ್ರ ಸಲ್ಲಿಕೆ ಆರಂಭವಾಗಲಿದೆ.

ಈ ಕ್ಷೇತ್ರದಲ್ಲಿ ಬಳ್ಳಾರಿ ನಗರ ಮತ್ತು ವಿಜಯನಗರ ಕ್ಷೇತ್ರಗಳು ಸಾಮಾನ್ಯ ಕ್ಷೇತ್ರಗಳಾಗಿದ್ದರೆ. ಕೂಡ್ಲಿಗಿ, ಕಂಪ್ಲಿ, ಸಂಡೂರು ಹಾಗು ಬಳ್ಳಾರಿ ಗ್ರಾಮೀಣ ವಿಧಾನ ಸಭಾ ಕ್ಷೇತ್ರಗಳು ಪರಿಶಿಷ್ಟ ವರ್ಗಕ್ಕೆ ಮೀಸಲಾತಿ ಹೊಂದಿದ್ದರೆ. ಹಗರಿಬೊಮ್ಮನಹಳ್ಳಿ ಮತ್ತು ಹಡಗಲಿ ಕ್ಷೇತ್ರಗಳು ಪರಿಶಿಷ್ಟ ಜಾತಿಗೆ ಮೀಸಲಾತಿ ಹೊಂದಿವೆ. ಕ್ಷೇತ್ರದಲ್ಲಿ ೯ ಲಕ್ಷ ೨೦ ಸಾವಿರದ ೨೨ ಪುರುಷ, ೯ ಲಕ್ಷ ೪೫ ಸಾವಿರದ ೫೩ ಮಹಿಳೆ ಹಾಗೂ ೨೬೬ ಇತರೆ ಮತದಾರರು ಸೇರಿ ಒಟ್ಟು ೧೮ ಲಕ್ಷ ೬೫ ಸಾವಿರದ ೩೪೧ ಮತದಾರರಿದ್ದಾರೆ. ಇವರಲ್ಲಿ ೫೩ ಸಾವಿರದ ೧೬೯ ಯುವ, ೨೪ ಸಾವಿರದ ೮೪೧ ವಿಶೇಷಚೇತನ, ಹಾಗೂ ೧೩ ಸಾವಿರದ ೨೮೫, ೮೫ ವರ್ಷ ಮೇಲ್ಪಟ್ಟ ಮತದಾರರರಿದ್ದಾರೆ. ಮತದಾನಕ್ಕೆ ೧ ಸಾವಿರದ ೯೭೨

ಮತಕೇಂದ್ರಗಳ ವ್ಯವಸ್ಥೆ ಮಾಡುತ್ತಿದ್ದು. ಜಿಲ್ಲಾಡಳಿತ ಹಾಗೂ ಪೊಲೀಸ್ ಇಲಾಖೆಯಿಂದ ಸಮರೋಪಾದಿಯಲ್ಲಿ ಸಿದ್ಧತೆ ನಡೆದಿದೆ. ಚುನಾವಣೆಯನ್ನು ಮುಕ್ತ ಮತ್ತು ಶಾಂತಿಯುತವಾಗಿ ನಡೆಸಲು ಕ್ಷೇತ್ರದ ಬಳ್ಳಾರಿ ಜಿಲ್ಲೆಯಲ್ಲಿ ೨೪ ಮತ್ತು ವಿಜಯನಗರ ಜಿಲ್ಲೆಯಲ್ಲಿ ೧೧ ಸೇರಿ ಒಟ್ಟು ೩೫ ಚೆಕ್ ಪೋಸ್ಟ್‌ಗಳನ್ನು ಸ್ಥಾಪಿಸಲಾಗಿದೆ. ದಿನದ ೨೪ ತಾಸು ತಪಾಸಣಾ ಕಾರ್ಯ ನಡೆಯುತ್ತಿದೆ. ಹೊಸ ಅರ್ಹ ಮತದಾರರನ್ನು ಪಟ್ಟಿಯಲ್ಲಿ ಸೇರಿಸುವ ಜೊತೆಗೆ ಮತದಾನದ ಬಗ್ಗೆ ಜಾಗೃತಿ ಮೂಡಿಸುವ ಸಲುವಾಗಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ನೇತೃತ್ವದಲ್ಲಿ ಸ್ವೀಪ್ ಸಮಿತಿ ಕಾಲೇಜುಗಳು, ಸಾರ್ವಜನಿಕ ಸ್ಥಳಗಳು ಹಾಗೂ ಜನನಿಬಿಡ ಪ್ರದೇಶಗಳಲ್ಲಿ ಮತದಾನದ ಮಹತ್ವ ಸಾರುವ ಬೀದಿ ನಾಟಕ, ಪ್ರಬಂಧ ಸ್ಪರ್ಧೆ, ಶಾಲಾ ಕಾಲೇಜು ಮಕ್ಕಳಿಂದ ಪೋಷಕರಿಗೆ ಮತದಾನ ಮಾಡುವ ಮನವಿ ಪತ್ರ ಬರವಣಿಗೆ, ಕೋಲಾಟ, ಬೊಂಬೆ ಪ್ರದರ್ಶನ, ಸೈಕಲ್ ಜಾಥಾ ಏರ್ಪಡಿಸಲಾಗುತ್ತಿದೆ. ಮದುವೆ ಸಮಾರಂಭಗಳಲ್ಲೂ ಮತದಾನದ ಜಾಗೃತಿ ಕಾರ್ಯ ನಡೆಸಲಾಗುತ್ತಿದೆ. ಸಾರ್ವಜನಿಕರು ಮಾದರಿ ನೀತಿ ಸಂಹಿತೆ ಉಲ್ಲಂಘನೆ ಬಗ್ಗೆ ದೂರು, ಮತದಾರರ ಪಟ್ಟಿಯಲ್ಲಿ ಹೆಸರು ಇರುವುದನ್ನು ಖಚಿತಪಡಿಸಿಕೊಳ್ಳಲು ಹಾಗೂ ಚುನಾವಣೆ ಸಂಬಂಧಿತ ಸಾರ್ವಜನಿಕರ ಕುಂದು ಕೊರತೆಗಳು ಇದ್ದಲ್ಲಿ ಟೋಲ್ ಫ್ರೀ ಸಂಖ್ಯೆ ೧-೯-೫-೦ ಅಥವಾ ೦೮೩೯೨-೨೭೭೧೦೦ ಗೆ ಕರೆ ಮಾಡಲು ವ್ಯವಸ್ಥೆ ಮಾಡಲಾಗಿದೆ. ೧೬೭ ಸೆಕ್ಟರ್ ಅಧಿಕಾರಿಗಳು, ೨೬ ಎಫ್‌ಎಸ್‌ಟಿ ತಂಡಗಳು, ೩೦ ಎಸ್‌ಎಸ್‌ಟಿ ತಂಡಗಳು, ೮ ವಿವಿಟಿ ತಂಡಗಳು, ೧೮ ವಿಎಸ್‌ಟಿ ತಂಡಗಳು, ೧೦ ಚುನಾವಣೆ ವೆಚ್ಚ ವೀಕ್ಷಕರು, ೮ ಅಕೌಂಟಿಂಗ್ ತಂಡಗಳನ್ನು ರಚಿಸಲಾಗಿದೆ. ಮತಗಟ್ಟೆಗಳಲ್ಲಿ ಕರ್ತವ್ಯ ನಿರ್ವಹಿಸಲು ಒಟ್ಟು ೯ ಸಾವಿರದ ೪೭೪ ಅಧಿಕಾರಿ ಹಾಗೂ ಸಿಬ್ಬಂದಿಗಳನ್ನು ನೇಮಿಸಲಾಗಿದ್ದು ಅವರಿಗೆ ಈಗಾಗಲೇ ಮತಯಂತ್ರಗಳ ಬಳಕೆ ಸೇರಿದಂತೆ ಮತದಾನ ಪ್ರಕ್ರಿಯೆಯ ಮೊದಲ ಹಂತದ ತರಬೇತಿ ನೀಡಲಾಗಿದೆ.

<><*<><>*><>

ಮಂಡ್ಯ ಜಿಲ್ಲೆಯಲ್ಲಿ ಬರದಿಂದ ತತ್ತರಿಸಿರುವ ನಾಗಮಂಗಲ ತಾಲ್ಲೂಕಿನಲ್ಲಿ ಈಗ ಕುಡಿಯುವ ನೀರಿಗೂ ಹಾಹಾಕಾರ ಉಂಟಾಗಿದೆ. ಈ ಹಿನ್ನಲೆಯಲ್ಲಿ ಜಿಲ್ಲಾ ಪಂಚಾಯ್ತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶೇಕ್ ತನ್ವೀರ್ ಆಸೀಫ್ ತಾಲ್ಲೂಕಿನ ಬೆಳ್ಳೂರು ಪಟ್ಟಣಕ್ಕೆ ಭೇಟಿ ನೀಡಿ ಬರಪರಿಸ್ಥಿತಿ ಅವಲೋಕಿಸಿದರು. ಕುಡಿಯುವ ನೀರಿನ ಸಮಸ್ಯೆ ಇರುವ ಗ್ರಾಮಗಳ ಅಂಕಿ ಅಂಶಗಳ ವರದಿ ಸಂಗ್ರಹಿಸಿ, ಕುಡಿಯುವ ನೀರಿಗೆ ಸಮಸ್ಯೆಯಾಗದಂತೆ ಕ್ರಮ ವಹಿಸಬೇಕೆಂದು ನಾಗಮಂಗಲ ತಾಲ್ಲೂಕಿನ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪ ವಿಭಾಗದ ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ಗೆ ಸ್ಥಳದಲ್ಲೇ ಸೂಚನೆ ನೀಡಿದ್ದಾರೆ.

<><*<><>*><>

ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಟ್ಯಾಂಕರ್ ಮೂಲಕ ನೀರು ಪೂರೈಕೆ ಮಾಡುತ್ತಿರುವ ಕಂಪೆನಿಗಳು ಎನ್ ಬಿಎಲ್ ಮಾನ್ಯತೆ ಹೊಂದಿರುವ ಅಥವಾ ಸರ್ಕಾರಿ ಗುಣಮಟ್ಟದ ಪರೀಕ್ಷಾ ವರದಿಯನ್ನು ಇದೇ ೧೩ರ ಒಳಗೆ ಪಾಲಿಕೆ ಕಾರ್ಯಪಾಲಕ ಅಭಿಯಂತರರಿಗೆ ಸಲ್ಲಿಸುವಂತೆ ಪಾಲಿಕೆ ಆಯುಕ್ತ ಆನಂದ್ ಸಿ.ಎಲ್ ಸೂಚನೆ ನೀಡಿದ್ದಾರೆ. ನಗರದಲ್ಲಿ ಕುಡಿಯುವ ನೀರಿನ ಕೊರತೆಯಿಂದಾಗಿ ಸಾರ್ವಜನಿಕರು ಟ್ಯಾಂಕರ್ ನೀರು ಅವಲಂಬಿಸುತ್ತಿದ್ದಾರೆ. ಕಲುಷಿತ ನೀರಿನ ಪೂರೈಕೆ ಹಿನ್ನೆಲೆಯಲ್ಲಿ ಸಾಂಕ್ರಾಮಿಕ ರೋಗಗಳ ಪ್ರಕರಣಗಳು ಕಂಡುಬರುತ್ತಿದ್ದು, ಇದನ್ನು ಗಂಭೀರವಾಗಿ ಪರಿಗಣಿಸಲಾಗಿದೆ. ಪಾಲಿಕೆ ನೀಡಿದ ಸೂಚನೆಯನ್ನು ಕಂಪೆನಿಗಳು ಕಡ್ಡಾಯವಾಗಿ ಪಾಲಿಸಬೇಕು. ಇಲ್ಲವಾದಲ್ಲಿ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><*<><>*><>

ದಕ್ಷಿಣ ಕನ್ನಡ ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ೧೭೧ ಸೂಕ್ಷ್ಮ ಮತಗಟ್ಟೆಗಳನ್ನು ಗುರುತಿಸಲಾಗಿದ್ದು, ಶೇಕಡಾ ನೂರರಷ್ಟು ವೆಬ್ ಕಾಸ್ಟಿಂಗ್ ವ್ಯವಸ್ಥೆ ಅಳವಡಿಸಲಾಗುವುದು ಎಂದು ಜಿಲ್ಲಾಧಿಕಾರಿ ಮುಲ್ಲೈ ಮುಗಿಲನ್ ತಿಳಿಸಿದ್ದಾರೆ. ಚುನಾವಣೆಗೆ ಸಂಬಂಧಿಸಿದಂತೆ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಎಲ್ಲಾ ೧ ಸಾವಿರದ ೮೭೬ ಬೂತ್ ಗಳಲ್ಲೂ ಮತದಾನದ ಶೇಕಡಾವಾರು ಪ್ರಮಾಣ ಹೆಚ್ಚಳಕ್ಕೆ ಆದ್ಯತೆ ನೀಡಲಾಗಿದೆ. ದಾವಣಗೆರೆ ಲೋಕಸಭಾ ಕ್ಷೇತ್ರದ ಚುನಾವಣಾ ವೀಕ್ಷಕರನ್ನಾಗಿ ಕೇಂದ್ರ ಚುನಾವಣಾ ಆಯೋಗ ಐಆರ್‌ಎಸ್ ಸೇವೆಯ ಪ್ರತಿಭಾ ಸಿಂಗ್ ಅವರನ್ನು ನೇಮಕ ಮಾಡಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಡಾ. ಎಂ.ವಿ.ವೆಂಕಟೇಶ್ ತಿಳಿಸಿದ್ದಾರೆ. ಕ್ಷೇತ್ರದ ಅಭ್ಯರ್ಥಿಗಳ ಚುನಾವಣಾ ವೆಚ್ಚದ ಮೇಲೆ ನಿಗಾವಹಿಸಲಿದ್ದು, ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧಿಸುವ ಅಭ್ಯರ್ಥಿಗಳು ೯೫ ಲಕ್ಷ ರೂಪಾಯಿ ವೆಚ್ಚ ಮಾಡಲು ಮಿತಿ ಇರುತ್ತದೆ ಎಂದು ಜಿಲ್ಲಾಧಿಕಾರಿ ತಿಳಿಸಿದ್ದಾರೆ.

<><*<><>*><>

ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಜನರು ಯುಗಾದಿ ಹಬ್ಬವನ್ನು ಸಡಗರ ಸಂಭ್ರಮದಿಂದ ಆಚರಿಸುತ್ತಿದ್ದಾರೆ. ಚಿಕ್ಕಮಗಳೂರು ಜಿಲ್ಲೆಯಲ್ಲಿ ಯುಗಾದಿ ಹಬ್ಬದ ಅಂಗವಾಗಿ ಬೇವು ಬೆಲ್ಲ ತಿಂದು ಪರಸ್ಪರ ಶುಭಾಶಯಗಳನ್ನು ವಿನಿಮಯ ಮಾಡಿಕೊಳ್ಳಲಾಗುತ್ತಿದ್ದು ಹೊರನಾಡಿನ ಅನ್ನಪೂರ್ಣೇಶ್ವರಿ ದೇವಾಲಯ, ಶೃಂಗೇರಿ ಶಾರದ ಪೀಠ, ರಂಭಾಪುರಿ ಪೀಠ ಬಾಳೆಹೊನ್ನೂರಿನಲ್ಲಿ ವಿಶೇಷ ಪೂಜಾ ಕಾರ್ಯಗಳನ್ನು ಬೆಳಗ್ಗಿನಿಂದ ಹಮ್ಮಿಕೊಳ್ಳಲಾಗಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಪ್ರಸಿದ್ಧ ದೇವಾಲಯಗಳಾದ ಘಾಟಿ ಸುಬ್ರಹ್ಮಣ್ಯ, ಶಿವಗಂಗೆ, ದೇವಾಲಯಗಳಲ್ಲಿ

ಪೂಜಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಬಯಲುಸೀಮೆಯಲ್ಲಿ ವಿಶಿಷ್ಟವಾಗಿ ಹಬ್ಬ ಆಚರಿಸಲಾಗುತ್ತಿದ್ದು, ದೊಡ್ಡಬಳ್ಳಾಪುರದಲ್ಲಿ ಕಾಮನಮೂರ್ತಿಗೆ ಪೂಜೆ ಸಲ್ಲಿಸಲಾಯಿತು. ಚಿತ್ರದುರ್ಗ ಜಿಲ್ಲೆಯಲ್ಲಿ ಜನರು ಮನೆಯ ಬಾಗಿಲುಗಳಿಗೆ ತೋರಣ ಕಟ್ಟಿ, ಬೇವು ಬೆಲ್ಲ ಪರಸ್ಪರ ಹಂಚಿಕೊಂಡು ಯುಗಾದಿ ಹಬ್ಬವನ್ನು ಆಚರಿಸಿದರು. ಹಬ್ಬದ ಅಂಗವಾಗಿ ಜಿಲ್ಲೆಯ ಪ್ರಮುಖ ದೇವಾಲಯಗಳಾದ ತೇರುಮಲ್ಲೇ, ಪಾತಾಳೇಶ್ವರ, ನೀಲಕಂಠೇಶ್ವರ, ಕಾಲಭೈರವೇಶ್ವರ ದೇವಸ್ಥಾನದಲ್ಲಿ ವಿಶೇಷ ಪೂಜೆ ಹಮ್ಮಿಕೊಳ್ಳಲಾಗಿತ್ತು.

**<><*<><>*><>**

ಇನ್ನು ಹವಾವರ್ತಮಾನ

ರಾಜ್ಯಾದ್ಯಂತ ಒಣಹವೆ ಮುಂದುವರಿದಿದೆ. ರಾಜ್ಯದಲ್ಲಿ ಅತೀ ಗರಿಷ್ಠ ಉಷ್ಣಾಂಶ ೪೧.೮ ಡಿಗ್ರಿ ಸೆಲ್ಸಿಯಸ್ ಕಲಬುರಗಿಯಲ್ಲಿ ದಾಖಲಾಗಿದೆ.

ಬಾಗಲಕೋಟೆ, ಕಲಬುರಗಿ, ರಾಯಚೂರು, ಕೊಪ್ಪಳ, ಯಾದಗಿರಿ ಮತ್ತು ಬಳ್ಳಾರಿ ಜಿಲ್ಲೆಗಳಲ್ಲಿ ಅತಿ ಹೆಚ್ಚು ತಾಪಮಾನ ದಾಖಲಾಗುವ ಸಾಧ್ಯತೆಯಿದೆ.

ಬೆಂಗಳೂರು ಮತ್ತು ಸುತ್ತಮುತ್ತ ನಿರ್ಮಲ ಆಕಾಶವಿದ್ದು, ಗರಿಷ್ಠ ಉಷ್ಣಾಂಶ ೩೬ ಮತ್ತು ಕನಿಷ್ಠ ೨೨ ಡಿಗ್ರಿ ಸೆಲ್ಸಿಯಸ್‌ನಷ್ಟು ತಾಪಮಾನ ನಿರೀಕ್ಷಿತ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**